ಕರ್ನಾಟಕ ಸರ್ಕಾರ
**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/203/ಕೌಶಲ್ಯಾಭಿವೃದ್ಧಿ/2022-23 ದಿನಾಂಕ: 20.02.2024

# ಸುತ್ತೋಲೆ

**ವಿಷಯ:** ಯುವ ಸಮೃದ್ಧಿ ಸಮ್ಮೇಳನದ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳದ ಕಾರ್ಯಕ್ರಮದಲ್ಲಿ ಪ್ಲೇಸ್‌ಮೆಂಟ್ ಸೆಲ್ ಅಧಿಕಾರಿಗಳು ಭಾಗವಹಿಸುವ ಕುರಿತು.

**ಉಲ್ಲೇಖ:** 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ರವರ ಪತ್ರ ಸಂಖ್ಯೆ:ಕೆಎಸ್‌ಡಿಸಿ/ಉಮೇ/ವಿವ-42/2023-24 ದಿನಾಂಕ:06.02.2024.
2. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:17.02.2024.

* * * * * *

ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಸೂಚನೆಯ ಮೇರೆಗೆ ಮಾನ್ಯ ಸಚಿವರು, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಅವರ ಅಧ್ಯಕ್ಷತೆಯ ಸಭೆಯಲ್ಲಿ ನಿರ್ಣಯಿಸಿಲಾಗಿರುವಂತೆ ಬೆಂಗಳೂರು ನಗರ ಜಿಲ್ಲೆಯ ಅರಮನೆ ಮೈದಾನದಲ್ಲಿ ದಿನಾಂಕ:26.02.2024 ಮತ್ತು 27.02.2024 ರಂದು ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಆಯೋಜಿಸಲು ತೀರ್ಮಾನಿಸಲಾಗಿರುತ್ತದೆ.

ಯುವ ಸಮೃದ್ಧಿ ಸಮ್ಮೇಳನವಾದ ಈ ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳದ ಕಾರ್ಯಕ್ರಮದಲ್ಲಿ ರಾಜ್ಯದ ಯುವ ಜನತೆಗೆ ಹಾಗೂ ಉದ್ಯೋಗಾಕಾಂಕ್ಷಿಗಳಿಗೆ ಉಪಯುಕ್ತವಾಗುವಂತೆ ಹಾಗೂ ರಾಜ್ಯದ ಆಸಕ್ತ ಯುವಜನತೆಯು ಸ್ವಯಂ ಉದ್ಯೋಗಿಗಳಾಗಲು / ಸ್ವಾವಲಂಭಿಗಳಾಗಲು ಅರಿವು ಮೂಡಿಸಿ, ಪ್ರೇರೇಪಿಸಿ, ಜೀವನದಲ್ಲಿ ಭರವಸೆಯ ಬೆಳಕು ಮೂಡಿಸುವ ಉದ್ದೇಶದಿಂದ **ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳ ಪ್ಲೇಸ್‌ಮೆಂಟ್‌ಸೆಲ್ ಅಧಿಕಾರಿಗಳು ಮತ್ತು ಪ್ರಾದೇಶಿಕ ಕಛೇರಿವಾರು ಒಬ್ಬ ನೋಡಲ್ ಅಧಿಕಾರಿಗಳು** ಈ ಕೆಳಕಂಡಂತೆ ನಿಗಧಿಪಡಿಸಿರುವ ದಿನಾಂಕಗಳಂದು ಕಡ್ಡಾಯವಾಗಿ ಭಾಗವಹಿಸುವುದು ಹಾಗೂ ಇಲಾಖಾ ವತಿಯಿಂದ ನೀಡಲಾಗುವ ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ಅಧಿಕಾರಿಗಳಿಗೆ ಒಪ್ಪಿಸುವ ನಿಬಂಧನೆಗೊಳಪಟ್ಟು ಅನ್ಯಕಾರ್ಯನಿಮಿತ್ತ ಮಂಜೂರು ಮಾಡಲಾಗಿದೆ ಹಾಗೂ ನಿಯಮಾನುಸಾರ ಭತ್ಯೆಗಳಿಗೆ ಅರ್ಹರಿರುತ್ತಾರೆ.

| ಕ್ರ. ಸಂ. | ನಿಗಧಿಪಡಿಸಿರುವ ದಿನಾಂಕ | ಪ್ರಾದೇಶಿಕ ಕಛೇರಿವಾರು ಕಾಲೇಜುಗಳ ಪ್ಲೇಸ್‌ಮೆಂಟ್‌ಸೆಲ್ ಅಧಿಕಾರಿಗಳು |
|---|---|---|
| 01. | 26.02.2024 | ಬೆಂಗಳೂರು, ಧಾರವಾಡ, ಕಲಬುರಗಿ. |
| 02. | 27.02.2024 | ಮಂಗಳೂರು, ಮೈಸೂರು, ಶಿವಮೊಗ್ಗ. |

ಮುಂದುವರೆದು, ಮೇಲ್ಕಂಡ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸುವ ಕಾಲೇಜುಗಳ ಪ್ಲೇಸ್‌ಮೆಂಟ್ ಸೆಲ್ ಅಧಿಕಾರಿಗಳು ಉದ್ಯೋಗ ಮೇಳದ ಆಯೋಜನೆಯ ರೂಪುರೇಷೆಗಳನ್ನು ಅರ್ಥಮಾಡಿಕೊಂಡು ಹಾಗೂ ಭಾಗವಹಿಸುವ ಕಂಪನಿಗಳ ಜೊತೆ ಸಂವಹನ ನಡೆಸಿ ಮುಂದಿನ ದಿನಗಳಲ್ಲಿ ತಮ್ಮ ಕಾಲೇಜುಗಳಲ್ಲಿ ಉದ್ಯೋಗ ಮೇಳಗಳನ್ನು ಆಯೋಜನೆ ಮಾಡುವುದರ ಮುಖಾಂತರ ವಿದ್ಯಾರ್ಥಿಗಳು ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಂಡು ಉದ್ಯೋಗವನ್ನು ಪಡೆಯುವಲ್ಲಿ ಯಶಸ್ವಿಯಾಗುವಂತೆ ಕ್ರಮವಹಿಸುವುದು.

**ಹೆಚ್ಚಿನ ಮಾಹಿತಿಗಾಗಿ: 1. ಶ್ರೀಮತಿ ಸುಮತಿ ಬಿ.ಎಸ್., ಕಾರ್ಯನಿರ್ವಾಹಕ ನಿರ್ದೇಶಕರು-3, ಕೆ.ಎಸ್.ಡಿ.ಸಿ. ದೂರವಾಣಿ ಸಂಖ್ಯೆ: 9663451401.**

**2. ಶ್ರೀ ಮಹೇಶ್ ಎಂ., ದೂರವಾಣಿ ಸಂಖ್ಯೆ: 8152882461.**

**3. ಡಾ. ನಾಗೇಶ್ ಆರ್. ಪ್ಲೇಸ್‌ಮೆಂಟ್‌ಸೆಲ್ ಅಧಿಕಾರಿ, ಕಾ.ಶಿ.ಇ. ಬೆಂಗಳೂರು, ದೂರವಾಣಿ ಸಂಖ್ಯೆ: 9986800014.**

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮತ್ತು ಪ್ಲೇಸ್‌ಮೆಂಟ್‌ಸೆಲ್ ಅಧಿಕಾರಿಗಳಿಗೆ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ವ್ಯಾಪ್ತಿಗೆ ಬರುವ ಖಾಸಗಿ ಅನುದಾನಿತ ಕಾಲೇಜುಗಳಿಗೆ ರವಾನಿಸಲು ಸೂಚಿಸಲಾಗಿದೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು– ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

4. ಆಯುಕ್ತರ, ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ ಹಾಗೂ ಜಂಟಿ ನಿರ್ದೇಶಕರುಗಳ ಆಪ್ತ ಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
5. ಕಛೇರಿ ಪ್ರತಿ.